# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6)ಪಿಆರ್/ಇ-59806/23-24

ಮುಖ್ಯ ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 27. 2. 24

ಮಾನ್ಯ ಮುಖ್ಯ ಅಭಿಯಂತರರು (ಯೋಜನೆ) ರವರ ಕಛೇರಿ
ಸಂಖ್ಯೆ: 1492
ದಿನಾಂಕ: 02/03/2024
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು

## ಕಛೇರಿ ಆದೇಶ

ವಿಷಯ: ಶ್ರೀ ರಘು ಬಿ. ಡಿ, ಸಹಾಯಕ ಅಭಿಯಂತರರು ರವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸುವ ಬಗ್ಗೆ.

ಉಲ್ಲೇಖ:
1) ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು ರವರ ಜ್ಞಾಪನ ಪತ್ರ ಸಂಖ್ಯೆ: ಸಿಬಿಎಸ್/41/ಸ.ಇಂ/ಸ್ಥ.ನಿ:ಇ.ಎಸ್.ಸಿ: 2023-24 ದಿ: 28-12-2023
2) ಶ್ರೀ ರಘು ಬಿ. ಡಿ, ಸಹಾಯಕ ಅಭಿಯಂತರರು ರವರ ಮನವಿ ದಿ: 07-02-2024
3) ಸಂಖ್ಯೆ: ಬಿ12(6)ಪಿಆರ್/56/23-24, ದಿನಾಂಕ: 05-07-2023ರ ಸುತ್ತೋಲೆ

----------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ ರಘು ಬಿ. ಡಿ, ಸಹಾಯಕ ಅಭಿಯಂತರರು, ಲೋಕೋಪಯೋಗಿ ಇಲಾಖೆಯಿಂದ ಎರವಲು ಸೇವೆಯ ಮೇಲೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ವಾರ್ಡ್-97, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ರಾಜರಾಜೇಶ್ವರಿನಗರ) ಉಪ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಇವರ ಸೇವೆಯನ್ನು ಉಲ್ಲೇಖ-(1)ರ ಅಧಿಕೃತ ಜ್ಞಾಪನದಲ್ಲಿ ನಗರಾಭಿವೃದ್ಧಿ ಇಲಾಖೆಯಿಂದ ಹಿಂಪಡೆದು, ಲೋಕೋಪಯೋಗಿ ಇಲಾಖೆ, ಉಪ ವಿಭಾಗ, ಚಾಮರಾನಗರ ಇಲ್ಲಿ ಖಾಲಿ ಇರುವ ಸಹಾಯಕ ಅಭಿಯಂತರರ ಹುದ್ದೆಗೆ ನೇಮಿಸಿ ಆದೇಶಿಸಿರುವ ಮೇರೆಗೆ ಸದರಿ ಅಭಿಯಂತರರು ಉಲ್ಲೇಖ-(2)ರಂತೆ ಸಲ್ಲಿಸಿರುವ ಮನವಿಯನ್ನು ಪರಿಗಣಿಸಿ, ಸದರಿಯವರನ್ನು ಈ ಕೆಳಕಂಡ ಷರತ್ತಿಗೊಳಪಡಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸಿ ಆದೇಶಿಸಿದೆ.

**ಷರತ್ತುಗಳು :-**

1. ಸದರಿ ಅಭಿಯಂತರರು ನಗರ ಪಾಲಿಕೆಯ ಸೇವಾ ಅವಧಿಯಲ್ಲಿ ನಗರ ಪಾಲಿಕೆಗೆ ಯಾವುದೇ ಆರ್ಥಿಕ ಬಾಕಿಯನ್ನು ಉಳಿಸಿಕೊಂಡಿದ್ದಲ್ಲಿ ಸದರಿಯವರಿಂದ ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ .
2. ಸದರಿ ಅಭಿಯಂತರರ ವಿರುದ್ಧ ಇಲಾಖಾ ವಿಚಾರಣೆ ಬಾಕಿ ಇದ್ದಲ್ಲಿ ನಿಯಮಾನುಸಾರ ಕ್ರಮಜರುಗಿಸುವ ಷರತ್ತಿಗೊಳಪಡಿಸಿದೆ .
3. ಪಾಲಿಕೆಯ ಹಿಂದಿನ ವರ್ಷಗಳ ಆಡಿಟ್ ವರದಿಗಳಲ್ಲಿ ಯಾವುದೇ ಆರ್ಥಿಕ ಬಾಕಿಯನ್ನು ಸದರಿಯವರಿಂದ ವಸೂಲಾತಿ ಮಾಡಲು ಸೂಚಿಸಿದಲ್ಲಿ , ಅಂತಹ ಮೊತ್ತವನ್ನು ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅವುಗಳಿಗೆ ಸಮರ್ಪಕ ಉತ್ತರ ನೀಡುವ ಷರತ್ತು ವಿಧಿಸಿದೆ .
4. ಸದರಿಅಭಿಯಂತರರು ನಗರ ಪಾಲಿಕೆಯ ವಸತಿಗೃಹದಲ್ಲಿ ವಾಸಿಸುತ್ತಿದ್ದಲ್ಲಿ ಕೂಡಲೇ ತೆರವುಗೊಳಿಸುವ ಷರತ್ತಿಗೊಳಪಡಿಸಿದೆ .
5. ವಾಕಿ ಟಾಕಿ , ಮೊಬೈಲ್ ಫೋನ್ , ಸಿಮ್ ಕಾರ್ಡ್ , ಹೆಲ್ಮ್ಯಾರ್ಡ್ , ಗುರುತಿನ ಚೀಟಿ (Identity card) ಹಾಗೂ ಲ್ಯಾಪ್ ಟಾಪ್ ಗಳನ್ನು ಪಾಲಿಕೆಯಿಂದ ಪಡೆದಿದ್ದಲ್ಲಿ ಇವುಗಳನ್ನು ಪಾಲಿಕೆಗೆ ಹಿಂದಿರುಗಿಸುವ ಷರತ್ತಿಗೊಳಪಡಿಸಿದೆ .

ಮೇಲ್ಕಂಡ ಆದೇಶದನ್ವಯ ಹಾಗೂ ಮಾನ್ಯ ಮುಖ್ಯ ಆಯುಕ್ತರು ರವರ ಉಲ್ಲೇಖ-(3)ರ ಸುತ್ತೋಲೆಯನ್ವಯ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳುವುದು.

SDA 02/03/2024

27/2

ಮಾನ್ಯ ಮುಖ್ಯ ಆಯುಕ್ತರು ರವರ ಆದೇಶದ ಮೇರೆಗೆ)

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

26/2/2024 26/2/24 27.2

ಪ್ರತಿಯನ್ನು:

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಕಾರ್ಯಾಲಯಕ್ಕೆ ಕಳುಹಿಸಿದೆ.
: ವಿಶೇಷ ಆಯುಕ್ತರು (ಯೋಜನೆ) / ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಸರ್ಕಾರದ ಅಧೀನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ರವರಿಗೆ ಕಳುಹಿಸಿದೆ
: ಸರ್ಕಾರದ ಅಧೀನ ಕಾರ್ಯದರ್ಶಿಗಳು, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಬೆಂಗಳೂರು ರವರಿಗೆ ಕಳುಹಿಸಿದೆ.
: ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರಿಗೆ ಕಳುಹಿಸಿದೆ.
: ಮಾನ್ಯ ವಲಯ ಆಯುಕ್ತರು (ರಾಜರಾಜೇಶ್ವರಿನಗರ) / ಜಂಟಿ ಆಯುಕ್ತರು (ರಾ.ರಾ.ನಗರ) ವಲಯ ರವರಿಗೆ ಕಳುಹಿಸಿದೆ.
: ಮುಖ್ಯ ಅಭಿಯಂತರರು (ರಾ.ರಾ.ನಗರ) / ಕಾ.ಪಾ.ಅ (ರಾಜರಾಜೇಶ್ವರಿನಗರ) ವಿಭಾಗ ರವರಿಗೆ ಕಳುಹಿಸಿದೆ.
: ನಿರ್ದೇಶಕರು, ಮಾಹಿತಿ ತಂತ್ರಜ್ಞಾನ / ಉಪ ಮುಖ್ಯ ಮಾಹಿತಿ ಅಧಿಕಾರಿ, ಬಿ.ಬಿ.ಎಂ.ಪಿ ರವರಿಗೆ ಕಳುಹಿಸಿದೆ.
: ಸ.ಕಾ.ನಿ.ಅ (ರಾಜರಾಜೇಶ್ವರಿನಗರ) ಉಪ ವಿಭಾಗ ರವರಿಗೆ ಕಳುಹಿಸಿದೆ.
: ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ಉಪ ವಿಭಾಗ, ಚಾಮರಾಜನಗರ ರವರಿಗೆ ಕಳುಹಿಸಿದೆ.
: ಮುಖ್ಯ ಲೆಕ್ಕಾಧಿಕಾರಿ / ಮುಖ್ಯ ಲೆಕ್ಕ ಪರಿಶೋಧಕರು / ಉ.ನಿ (ಹಣಕಾಸು-ರಾ.ರಾ.ನಗರ) ರವರಿಗೆ ಕಳುಹಿಸಿದೆ.
: ಸಂಬಂಧಪಟ್ಟ ಅಭಿಯಂತರರಿಗೆ / ಕಛೇರಿ ಪ್ರತಿ.